<u>ದಿನಾಂಕಃ **06-12-2025** ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣವಚನ ಮಾಡಿಸಲಾಯಿತು.</u>

<u>ಮುಖ್ಯವಿಚಾರಣೆಃ ಪ್ರತಿವಾದಿ **13** ರವರ ಪರ ಶ್ರೀ ವಿ ಆರ್ ಎನ್ ವಕೀಲರಿಂದಃ</u>

ನಾನು ಈ ದಾವೆಯಲ್ಲಿ 13 ನೇ ಪ್ರತಿವಾದಿ ಇದ್ದು, ನನ್ನ ಸಾಕ್ಷ್ಯದ ಮುಖ್ಯವಿಚಾರಣೆಯಾಗಿ ಪ್ರಮಾಣಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ . ಪ್ರಮಾಣಪತ್ರದಲ್ಲಿ ಬರೆದಿರುವ ವಿಷಯಗಳು ನನಗೆ ತಿಳಿದಿದೆ ಮತ್ತು ಸತ್ಯವಾಗಿದೆ.

ನಾನು ಈ ದಿನ ದಿನಾಂಕ 27.07.2020 ರ ಕ್ರಯ ಪತ್ರದ ದೃಢಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-2 ಎಂದು, ಎಂ ಆರ್ ಸಂಖ್ಯೆ ಹೆಚ್ 3/2020-21 ಇದರ ಮ್ಯುಟೇಷನ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-3 ಎಂದು, ಹರಿಹರಪುರ ಗ್ರಾಮದ ಸರ್ವೆ ನಂಬರ್ 290 ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-4 ಎಂದು, ದಿನಾಂಕ 14.06.2020 ರಂದು ವಕೀಲರು ನೀಡಿದ ಕಾನೂನು ಅಭಿಪ್ರಾಯದ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-5 ಎಂದು, ನಮೂನೆ ಒಂದರ ದೃಢಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-6 ಎಂದು, ಸಾಲ ಮಂಜೂರಾತಿ ದೃಢಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-7 ಎಂದು, ದಿನಾಂಕ 27.01.1979 ರ ವಿಭಾಗ ಪತ್ರದ ದೃಢಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-8 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ</u> ವಾದಿ ಪರ ವಕೀಲರು ಸಮಯ ಕೋರಿದ್ದು, ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

Sd/-xxx
**ಹಿರಿಯ ಸಿವಿಲ್ ನ್ಯಾಯಾಧೀಶರುಃ ನ.ರಾ.ಪುರ,**
**ಸಂಚಾರಿ ನ್ಯಾಯಾಲಯ, ಕೊಪ್ಪ.**

ಸಾಕ್ಷಿದಾರರ ಸಹಿಃ